**1ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ**

**ಸಿ.ಸಿ ಸಂಖ್ಯೆ2279-2021**

**ಸಿ.ಡಬ್ಲ್ಯೂ -1 , ಪಿ.ಡಬ್ಲ್ಯೂ -1**

| | | |
|---|---|---|
| ಸಾಕ್ಷಿದಾರರ ಹೆಸರು | : | ಈಶ್ವರ |
| ತಂದೆಯ ಹೆಸರು | : | ದ್ಯಾವಪ್ಪ |
| ವಯಸ್ಸು | : | 44 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಕಾಗೋಡು ಗ್ರಾಮ, ಸಾಗರ ತಾಲ್ಲೂಕು. |

**ಪ್ರಮಾಣೀಕರಿಸಿದ ದಿನಾಂಕ : 08.06.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ಚಾಸ 2 ಮತ್ತು 5 ರವರ ಪರಿಚಯವಿದೆ, ಅವರು ನಮ್ಮ ಊರಿನವರೇ. ಚಾಸ 3 ನನ್ನ ಹೆಂಡತಿ. ಆರೋಪಿತರ ಪರಿಚಯವಿದೆ, ಅವರು ನಮ್ಮ ಊರಿನವರು. ಆರೋಪಿತರು ಮತ್ತು ನಮ್ಮ ನಡುವೆ ಯಾವುದೇ ಜಗಳವಾಗಿರುವುದಿಲ್ಲ. ಆರೋಪಿತರು ನಮಗೆ ಹೊಡಿ ಬಡಿ ಮಾಡಿ, ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ ಮತ್ತು ಜೀವ ಬೆದರಿಕೆ ಹಾಕಿರುವುದಿಲ್ಲ. ನಾನು ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಗೆ ಕಡತದಿಂದ ಒಂದು ದಾಖಲೆಯನ್ನು ತೆಗೆದು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಪಿರ್ಯಾದಾಗಿದ್ದು, ಅದನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ಥಳ ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪಿರ್ಯಾದಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ದಿಃ27.01.2021 ರಂದು ರಾತ್ರಿ 7.30 ರ ಸಮಯದಲ್ಲಿ ಕಾಗೋಡು ಗ್ರಾಮದ ಕನ್ನಪ್ಪ ರವರ ಮನೆಯ ಎದುರು ರಸ್ತೆಯಲ್ಲಿ ನಾನು ಗ್ರಾಮದ ದೇವಸ್ಥಾನದ ಹತ್ತಿರ ನಡೆಯುತ್ತಿರುವ ಸಭೆಗೆ

ಹೋಗುತ್ತಿದ್ದಾಗ 1 ರಿಂದ 4 ನೇ ಆರೋಪಿತರು ಗ್ರಾಮ ಪಂಚಾಯಿತಿ ಚುನಾವಣೆ ದ್ವೇಷದ ಹಿನ್ನೆಲೆ ನನ್ನನ್ನು ಅಡ್ಡಗಟ್ಟಿ ತಡೆದು ನಿಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನಗೆ ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯು ಕೈಗಳಿಂದ ನನ್ನ ಬೆನ್ನಿನ ಮೇಲೆ ಗುದ್ದಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಆರೋಪಿ ನನ್ನನ್ನು ಹಿಡಿದುಕೊಂಡಿದ್ದು, 3 ಮತ್ತು 4 ನೇ ಆರೋಪಿತರು ಕಾಲಿನಿಂದ ನನಗೆ ಒದ್ದು ಮೈ ಕೈ ಮೇಲೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯು ದೊಣ್ಣೆಯನ್ನು ತೆಗೆದುಕೊಂಡು ಬಂದು ನನ್ನ ಸೊಂಟಕ್ಕೆ ಹೊಡೆದ ಎಂದರೆ ಸರಿಯಲ್ಲ. ಬಿಡಿಸಲು ಬಂದ ಚಾಸ 2 ರವರನ್ನು 1 ನೇ ಆರೋಪಿ ಕೈಯಿಂದ ತಳ್ಳಿ ಬೀಳಿಸಿದ ಎಂದರೆ ಸರಿಯಲ್ಲ. ಬಿಡಿಸಲು ಬಂದ ಚಾಸ 3 ರವರಿಗೆ 1 ನೇ ಆರೋಪಿ ಅವಾಚ್ಯ ಶಬ್ದಗಳಿಂದ ನಿಂದಿಸಿದ ಎಂದರೆ ಸರಿಯಲ್ಲ. 1 ನೇ ಆರೋಪಿ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ರಾಜಿ ಆಗಿದ್ದೇನೆ ಎಂದರೆ ಸರಿ. ರಾಜಿ ಆಗಿರುವ ಕಾರಣ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.</u>

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.